# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 79 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ |
| ಉತ್ತರಿಸುವ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವಿವಿಧ ಹುದ್ದೆಗಳ ನೇಮಕಾತಿಗಳನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಕೈಗೊಂಡ ಕ್ರಮಗಳೇನು; | ವಿವಿಧ ಇಲಾಖೆಯವರು ಸಲ್ಲಿಸುವ ನೇಮಕಾತಿ ಪ್ರಸ್ತಾವನೆ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ನಿಗಧಿತ ಸಮಯದಲ್ಲಿ ದತ್ತಾಂಶವನ್ನು ಸಂಗ್ರಹಿಸಿ, ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗುತ್ತದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಪರೀಕ್ಷೆ ನಡೆಸುವ ಕುರಿತು ಕಾರ್ಯಕ್ರಮವನ್ನು ರೂಪಿಸಿಕೊಳ್ಳಲಾಗುತ್ತದೆ. ಪರೀಕ್ಷೆಯನ್ನು ನಿಗಧಿತ ದಿನಾಂಕಗಳಲ್ಲಿ ನಡೆಸಿ, ಪರೀಕ್ಷೆ ಮುಗಿದ ಅತ್ಯಂತ ಸ್ವಲ್ಪ ಸಮಯದಲ್ಲಿಯೇ ತಾತ್ಕಾಲಿಕ ಕೀ ಉತ್ತರಗಳನ್ನು ಪ್ರಕಟಿಸಿ, ಅಭ್ಯರ್ಥಿಗಳನ್ನು ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತಿದೆ. ನಂತರ ಅಂತಿಮ ಕೀ ಉತ್ತರಗಳನ್ನು ಅಳವಡಿಸಿಕೊಂಡು ಮೆರಿಟ್ ಪಟ್ಟಿ ತಯಾರಿಸಿ, ನಿಗಧಿತ ಸಮಯದಲ್ಲಿ ಆಯಾ ಇಲಾಖೆಗೆ ಹಸ್ತಾಂತರಿಸಲಾಗುತ್ತದೆ.<br><br>ಈ ಎಲ್ಲಾ ವಿಧಾನಗಳನ್ನು ಅತ್ಯಂತ ಗೌಪ್ಯತೆಯಿಂದ ಮುನ್ನೆಚ್ಚರಿಕೆ ವಹಿಸಿ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. |
| ಆ | ಪ್ರಾಧಿಕಾರವು ಪರೀಕ್ಷಾ ಕೇಂದ್ರಗಳನ್ನು ಯಾವ ಮಾನದಂಡದಡಿಯಲ್ಲಿ ನಿಗದಿಪಡಿಸುತ್ತದೆ; | ಅಭ್ಯರ್ಥಿಗಳು ಆಯಾ ಪರೀಕ್ಷೆಗೆ ಹಾಜರಾಗುವ ಕೇಂದ್ರಗಳ ವಿವರಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಪಡೆದು, ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ, ಪರೀಕ್ಷೆಯನ್ನು ನಡೆಸಲಾಗುತ್ತದೆ.<br><br>ಒಂದು ವೇಳೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ಸಂಖ್ಯೆಯು ಹೆಚ್ಚಾದ ಜಿಲ್ಲೆಯಲ್ಲಿ, ಅದೇ ಜಿಲ್ಲೆಯ ಹತ್ತಿರದ ತಾಲ್ಲೂಕುಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗುತ್ತದೆ.<br><br>ಪರೀಕ್ಷೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ಸಂಖ್ಯೆ ಕಡಿಮೆ ಇದ್ದಲ್ಲಿ ಬೆಂಗಳೂರಿನಲ್ಲಿ ಮಾತ್ರ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸಲಾಗುತ್ತದೆ. ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರಗಳನ್ನು ಕಂಪ್ಯೂಟರ್ Randomwise ನಿಗಧಿಪಡಿಸಲಾಗುವುದು. |

| | | |
|---|---|---|
| ಇ) | ಇತ್ತೀಚೆಗೆ ನಡೆದ ಗ್ರಾಮ ಆಡಳಿತ ಹುದ್ದೆಗೆ ಪ್ರತಿ ಅಭ್ಯರ್ಥಿಗೆ 750/- ರೂ ಶುಲ್ಕ ನಿಗದಿಪಡಿಸಿದ್ದು, ನಿಜವೇ; ಇದ್ದಲ್ಲಿ, ಇಷ್ಟು ದೊಡ್ಡ ಪ್ರಮಾಣದ ಪರೀಕ್ಷಾ ಶುಲ್ಕವು ಅಭ್ಯರ್ಥಿಗಳ ಮೇಲೆ ಆರ್ಥಿಕ ಹೊರೆ ಬೀಳುವುದಿಲ್ಲವೇ; (ಪ್ರತಿ ಅರ್ಜಿಗೆ ಯಾವ ನಿಯಮ ಹಾಗೂ ಮಾನದಂಡದಡಿಯಲ್ಲಿ ಶುಲ್ಕವನ್ನು ನಿಗದಿಪಡಿಸಲಾಗುತ್ತದೆ ವಿವರ ನೀಡುವುದು) | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ವಾಯತ್ತ ಸಂಸ್ಥೆಯಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ಪ್ರಾಧಿಕಾರಕ್ಕೆ ಸರ್ಕಾರದಿಂದ ಆರ್ಥಿಕವಾಗಿ ಯಾವುದೇ ಅನುದಾನ ನೀಡಿರುವುದಿಲ್ಲ ಹಾಗೂ ನೇಮಕಾತಿ ಇಲಾಖೆಗಳು ಸಹ ಅನುದಾನ ನೀಡುವುದಿಲ್ಲ.<br>ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಪರೀಕ್ಷಾ ಕೇಂದ್ರಗಳಿಗೆ ತಗಲಬಹುದಾದ ವೆಚ್ಚಗಳು, ಗೌಪ್ಯತಾ ವೆಚ್ಚಗಳು, ಮುದ್ರಣ ವೆಚ್ಚ, ಗೌಪ್ಯತಾ ಬಂಡಲುಗಳನ್ನು ಆಯಾ ಪರೀಕ್ಷಾ ಕೇಂದ್ರಗಳಿಗೆ ರವಾನಿಸುವುದು, ಪರೀಕ್ಷೆ ಮುಗಿದ ನಂತರ ಗೌಪ್ಯತಾ ಬಂಡಲುಗಳನ್ನು ಪ್ರಾಧಿಕಾರಕ್ಕೆ ತೆಗೆದುಕೊಂಡು ಬರುವುದು, ಪರೀಕ್ಷಾ ಕಾರ್ಯಗಳಲ್ಲಿ ನಿರತರಾಗುವ ಅಧಿಕಾರಿ/ಸಿಬ್ಬಂದಿಗಳಿಗೆ ಗೌರವಧನ ಭರಿಸುವುದು ಮುಂತಾದ ಎಲ್ಲಾ ವೆಚ್ಚಗಳನ್ನು ಪ್ರಾಧಿಕಾರವೇ ಭರಿಸುತ್ತಿದೆ. ಅಭ್ಯರ್ಥಿಗಳಿಗೆ ಹೆಚ್ಚಿನ ಆರ್ಥಿಕ ಹೊರೆಯಿಲ್ಲದೆ ಪ್ರಾಧಿಕಾರವು ಪರೀಕ್ಷೆಯನ್ನು ನಡೆಸಲು ಸಾಮಾನ್ಯ ವರ್ಗಕ್ಕೆ ರೂ.750/- ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗಕ್ಕೆ ರೂ.500/-ಮೊತ್ತವನ್ನು ನಿಗಧಿಪಡಿಸಲಾಗಿದೆ. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವ ಮೂಲಕ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಯಾವುದೇ ಆರ್ಥಿಕ ಲಾಭವನ್ನು ಪಡೆಯುತ್ತಿರುವುದಿಲ್ಲ.<br><br>ಮುಂದುವರೆದು, ಇತ್ತೀಚಿನ ದಿನಗಳಲ್ಲಿ ಪರೀಕ್ಷೆಗಳನ್ನು ಹೆಚ್ಚಿನ ಪಾರದರ್ಶಕವಾಗಿ ನಡೆಸಲು ಆಧುನಿಕ ತಂತ್ರಜ್ಞಾನ ಬಳಕೆ ಮಾಡುವುದು ಅನಿವಾರ್ಯವಾಗಿದ್ದು, ಸದರಿ ಪರೀಕ್ಷೆಯ ಅರ್ಜಿಗೆ ನಿಗದಿಪಡಿಸಿರುವ ಅರ್ಜಿ ಶುಲ್ಕದಲ್ಲಿ ಎಲ್ಲಾ ವೆಚ್ಚಗಳನ್ನು ನಿಭಾಯಿಸುವುದು ಕಷ್ಟಸಾಧ್ಯವಾಗುತ್ತಿದೆ.<br><br>ಪರೀಕ್ಷೆಗಳಿಗೆ ತಗಲುವ ಖರ್ಚು, ವೆಚ್ಚಗಳನ್ನು ಲೆಕ್ಕ ಹಾಕಿ ಅರ್ಜಿ ಶುಲ್ಕವನ್ನು ನಿಗದಿಪಡಿಸುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರುತ್ತದೆ. |
| ಈ | ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಒಟ್ಟು ಎಷ್ಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ ಮತ್ತು ಈ ಅರ್ಜಿಗಳಿಂದ ಸಂಗ್ರಹವಾದ ಒಟ್ಟು ಮೊತ್ತ ಎಷ್ಟು? (ಮಾಹಿತಿಯನ್ನು ಒದಗಿಸುವುದು) | ಒಟ್ಟು 6,33,917 ಅಭ್ಯರ್ಥಿಗಳು ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಿರುತ್ತಾರೆ.<br><br>ಇದರಿಂದ ಸಂಗ್ರಹವಾದ ಒಟ್ಟು ಮೊತ್ತ ರೂ.40,08,74,500/- |

ಸಂ:ಇಡಿ 478 ಟಿಇಸಿ 2024

(ಡಾ: ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು